ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಹಿಂದುಳಿದ ವರ್ಗಗಳಲ್ಲಿ ಒಳ ಮೀಸಲಾತಿ ನೀಡುವ ಬಗ್ಗೆ

ಶ್ರೀ ಕೆ. ಪಿ. ನಂಜುಂಡಿ ವಿಶ್ವಕರ್ಮ (ವಿಧಾನಸಭೆಯಿಂದ ಚುನಾಯಿತರಾದವರು) -

68 (150) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ -

ಒಳ ಮೀಸಲಾತಿಯನ್ನು ರಾಜ್ಯ ಸರ್ಕಾರಗಳೇ ಕೊಡಬಹುದು ಎಂಬ ಆಶಯವನ್ನು ಸುಪ್ರೀಂ ಕೋರ್ಟ್ ಈಚೆಗೆ ತನ್ನ ತೀರ್ಪಿನಲ್ಲಿ ನೀಡಿದ್ದು, ಪರಿಶಿಷ್ಠ ಜಾತಿಯಲ್ಲಿ ಒಳ ಮೀಸಲಾತಿ ನೀಡಲು ನ್ಯಾಯಮೂರ್ತಿ ಸದಾಶಿವ ಆಯೋಗವು ಮಾನದಂಡ ನೀಡಿದ್ದು, ಅದರಂತೆ ಹಿಂದುಳಿದ ವರ್ಗಗಳಲ್ಲಿ ಒಳ ಮೀಸಲಾತಿ ನೀಡಲು ರಾಜ್ಯ ಸರ್ಕಾರ ಯಾವ ಮಾನದಂಡವನ್ನು ಅನುಸರಿಸುವುದು? (ವಿವರ ನೀಡುವುದು)